**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯಃ** ಖಜಾನೆಗಳಲ್ಲಿ ವರ್ಷಾಂತ್ಯದ ಬಿಲ್ಲುಗಳನ್ನು ಮಾರ್ಚ್ 31ರಂದೇ ತೀರ್ಣಗೊಳಿಸಿ ಲೆಕ್ಕವನ್ನು ಮುಕ್ತಾಯಗೊಳಿಸುವ ಬಗ್ಗೆ.

**ಓದಲಾಗಿದೆ**: 1. ಸರ್ಕಾರಿ ಆದೇಶ ಸಂಖ್ಯೆ: ಆಇ 01 ಬಿಪಿಇ 2019, ದಿನಾಂಕಃ14-01-2019 ಮತ್ತು ದಿನಾಂಕ:13-03-2019.

2. ಆಯುಕ್ತರು, ಖಜಾನೆ ಇಲಾಖೆ ಇವರ ಪತ್ರ ಸಂಖ್ಯೆ: ಖನಿ.ಪ್ರಕ್ರಿಯೆ/73/ 2019-20, ದಿನಾಂಕ:21-12-2019.

* * * * *

**ಪ್ರಸ್ತಾವನೆ:-**

2018-19ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿನಾಂಕ:31-3-2019ರಂದೇ 2018-19ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಉಲ್ಲೇಖ (1)ರ ಸರ್ಕಾರಿ ಆದೇಶದಲ್ಲಿ ಕಾಲಮಿತಿ ಸೂಚಿಸಿ ವೇಳಾಪಟ್ಟಿಯನ್ನು ನಿಗಧಿಪಡಿಸಲಾಗಿತ್ತು. ಸದರಿ ವೇಳಾಪಟ್ಟಿಯಂತೆ ಇಲಾಖಾ ಅಧಿಕಾರಿಗಳು ಹಾಗೂ ಖಜಾನಾಧಿಕಾರಿಗಳು ಸೂಕ್ತ ಕ್ರಮ ಕೈಗೊಂಡಿದ್ದು ಯೋಜನೆಯನ್ನು ಯಶಸ್ವಿಯಾಗಿ ನಿರ್ವಹಿಸಲಾಗಿದೆ.

2019-20ನೇ ಸಾಲಿನ ವರ್ಷಾಂತ್ಯದ ಬಿಲ್ಲುಗಳನ್ನು ಸಹ ಖಜಾನೆಗಳಲ್ಲಿ ಸ್ವೀಕರಿಸಿ ತೀರ್ಣಗೊಳಿಸಿ ದಿನಾಂಕ:30-3-2020ರಂದೇ 2019-20ನೇ ಸಾಲಿನ ಲೆಕ್ಕಗಳನ್ನು ಮುಕ್ತಾಯಗೊಳಿಸಲು ಸೂಕ್ತ ವೇಳಾಪಟ್ಟಿಯನ್ನು ನೀಡಿ ಸಾಕಷ್ಟು ಮುಂಚಿತವಾಗಿ ಆದೇಶವನ್ನು ಹೊರಡಿಸುವುದು ಅವಶ್ಯವಿದೆಯೆಂದು ಖಜಾನೆ ಆಯುಕ್ತರು ಮೇಲೆ (2)ರಲ್ಲಿ ಓದಲಾದ ಪತ್ರದಲ್ಲಿ ಸರ್ಕಾರವನ್ನು ಕೋರಿದ್ದಾರೆ. ಆದ್ದರಿಂದ ಈ ಆದೇಶ.

**ಸರ್ಕಾರಿ ಆದೇಶ ಸಂಖ್ಯೆಃ ಆಇ 01 ಬಿಪಿಇ 2020, ಬೆಂಗಳೂರು, ದಿನಾಂಕಃ 08-01-2020**

**ಎ) ಆಡಳಿತ ಇಲಾಖೆಗಳ ಬಿಲ್ಲುಗಳನ್ನು ಖಜಾನೆಗೆ ಸಲ್ಲಿಸಲು ನಿಗದಿಗೊಳಿಸಿರುವ ಕಾಲಮಿತಿ.**

| ಕ್ರಮ ಸಂಖ್ಯೆ | ಬಿಲ್ಲುಗಳ ಸ್ವರೂಪ/ವಿವರಗಳು | 31-01-2020ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ **upload** ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | 31-01-2020ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ |
|---|---|---|---|

| | | | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ |
|---|---|---|---|---|
| **1** | **2** | **3** | **4** | **5** |
| 1 | ವೇತನ / ವೇತನ ಬಾಕಿ ಬಿಲ್ಲುಗಳು/ಹಬ್ಬದ ಮುಂಗಡ ಬಿಲ್ಲು/ ಅನುದಾನಿತ ವೇತನ ಬಿಲ್ಲುಗಳು. | 14–02–2020 | 09–03–2020 | 12–03–2020 |
| 2 | ಕಛೇರಿ ವೆಚ್ಚಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು/ಪ್ರಯಾಣ ಭತ್ಯೆ ಬಿಲ್ಲುಗಳು. | 16-02-2020 | 09-03-2020 | 12-03-2020 |
| 3 | EAP ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆ ಹೊರತುಪಡಿಸಿ ಇತರೆ ಯೋಜನೆಗಳಿಗೆ ಸಂಬಂಧಿಸಿದಂತೆ ಸಾದಿಲ್ವಾರು ಬಿಲ್ಲುಗಳು ಹಾಗೂ ವೇತನೇತರ ಸಹಾಯಾನುದಾನ ಬಿಲ್ಲುಗಳು. | 20-02-2020 | 20-03-2020 | 23-03-2020 |
| 4 | ಸಂಕ್ಷಿಪ್ತ ಸಾದಿಲ್ವಾರು ಬಿಲ್ಲುಗಳು ಹಾಗೂ **EAP,** ಕೇಂದ್ರ ಪುರಸ್ಕೃತ ಹಾಗೂ ಕೇಂದ್ರ ಯೋಜನೆ ಬಿಲ್ಲುಗಳು. | 13-03-2020 | – | 20–03–2020 |
| 5 | ಏಪ್ರಿಲ್ ತಿಂಗಳಲ್ಲಿ ಪಾವತಿಯಾಗುವ ಮಾರ್ಚ್ ತಿಂಗಳ ವೇತನ/ವೇತನ ಅನುದಾನಿತ ಬಿಲ್ಲುಗಳು. | - | 02-04-2020 ರ ನಂತರ | |
| 6 | ಇಲಾಖೆಗಳು ಹಾಗೂ ಸಚಿವಾಲಯದ ಆಡಳಿತ ಇಲಾಖೆಗಳು ಹೊರಡಿಸುವ ಪುನರ್ವಿನಿಯೋಗದ ಬಿಲ್ಲುಗಳು. | - | - | 16-03-2020 |
| 7 | ವಿದ್ಯುಚ್ಛಕ್ತಿ, ದೂರವಾಣಿ ಹಾಗೂ ಕಟ್ಟಡ ಬಾಡಿಗೆಗೆ ಸಂಬಂಧಿಸಿದ ಬಿಲ್ಲುಗಳು. | - | - | 05-03-2020 |
| 8 | ಪೂರಕ ಅಂದಾಜು–2 ರಲ್ಲಿ ಸಕ್ರಮಗೊಳಿಸುವ ಹೆಚ್ಚುವರಿ ಆದೇಶದ | – | 13-03-2020 | 20-03-2020 |

| ಕ್ರಮ ಸಂಖ್ಯೆ | ಬಿಲ್ಲುಗಳ ಸ್ವರೂಪ/ವಿವರಗಳು | 31–01–2020ರೊಳಗೆ ಬಿಡುಗಡೆ ಆದೇಶಗಳನ್ನು ಹೊರಡಿಸಿ **upload** ಆಗಿರುವ ವೆಚ್ಚಗಳಿಗೆ ಸಂಬಂಧಿಸಿದಂತೆ ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ | 31–01–2020ರ ನಂತರ ಬಿಡುಗಡೆ ಮಾಡುವ ಹಾಗೂ ಆಗುವ ವೆಚ್ಚಗಳಿಗೆ ಸಂಬಂಧಿಸಿದಂತೆ | |
|---|---|---|---|---|
| | | | ಹಣ ಬಿಡುಗಡೆ/ upload ಮಾಡಲು ಕಡೆಯ ದಿನಾಂಕ | ಬಿಲ್ಲು ಸಲ್ಲಿಸುವ ಕಡೆಯ ದಿನಾಂಕ |
| **1** | **2** | **3** | **4** | **5** |
| | ಬಿಲ್ಲುಗಳು. | | | |
| 9 | ಪೂರಕ ಅಂದಾಜು–2 ರಲ್ಲಿ ಒದಗಿಸಿರುವ ಅನುದಾನದ ಬಿಲ್ಲುಗಳು | - | 13-03-2020 | 23-03-2020 |
| 10 | **ZP/TP** ಗೆ ಸಂಬಂಧಿಸಿದ ಎಲ್ಲಾ **upload** ಗಳು | - | 20-03-2020 | |

**ಬಿ) ಆಡಳಿತ ಇಲಾಖೆಗಳಿಗೆ ಸೂಚನೆಗಳು:–**

1. ದಿನಾಂಕ:30–03–2020ರ ಅಪರಾಹ್ನ 2.30 ಘಂಟೆಯ ನಂತರ ಯಾವುದೇ ಬಿಲ್ಲುಗಳನ್ನು ಖಜಾನೆಗಳಿಗೆ ಸಲ್ಲಿಸುವುದನ್ನು ನಿರ್ಬಂಧಿಸಲಾಗಿದೆ.

2. ಇಲಾಖಾ ಮುಖ್ಯಸ್ಥರು ಮತ್ತು ಅವರುಗಳ ಹಣ ಪಡೆಯುವ ಮತ್ತು ಬಟವಾಡೆ ಮಾಡುವ ಅಧಿಕಾರಿಗಳು ಈ ಆದೇಶದಲ್ಲಿ ತಿಳಿಸಿರುವ ವೇಳಾ ಪಟ್ಟಿಯಂತೆ ಕ್ರಮ ಕೈಗೊಳ್ಳತಕ್ಕದ್ದು ಮತ್ತು ಆರ್ಥಿಕ ಮಿತವ್ಯಯ ಆದೇಶಗಳನ್ನು ಕಡ್ಡಾಯವಾಗಿ ಪಾಲಿಸತಕ್ಕದ್ದು.

3. ಸರ್ಕಾರದ ಆದೇಶ ಸಂಖ್ಯೆ: ಆಇ 2 ಟಿಎಫ್‌ಸಿ 2004, ದಿನಾಂಕ:09–09–2004ರಲ್ಲಿ ತಿಳಿಸಿರುವ ಸೂಚನೆಗಳನ್ನು ಸಹ ಗಮನದಲ್ಲಿಟ್ಟುಕೊಂಡು ಮೇಲೆ ಹೇಳಿರುವ ಅಂಶಗಳನ್ನು ಗಣನೆಗೆ ತೆಗೆದುಕೊಂಡು ಆಯವ್ಯಯದಲ್ಲಿ ನಿಗದಿಪಡಿಸಿರುವ ಮೊತ್ತವನ್ನು ದಿನಾಂಕ:31–03–2020 ರೊಳಗೆ ವೆಚ್ಚ ಮಾಡತಕ್ಕದ್ದು.

4. ಕ್ರಮ ಸಂಖ್ಯೆ–4ಕ್ಕೆ ಸಂಬಂಧಿಸಿದಂತೆ ಕಾಲೇಜು ಶಿಕ್ಷಣ, ತಾಂತ್ರಿಕ ಶಿಕ್ಷಣ, ಪದವಿ ಪೂರ್ವ ಶಿಕ್ಷಣ,

ಅಂಗವಿಕಲರ ಕಲ್ಯಾಣ ಇಲಾಖೆಗೆ ಸಂಬಂಧಿಸಿದ ವಿದ್ಯಾರ್ಥಿ ವೇತನದ ಫಲಾನುಭವಿಗಳ ಪಟ್ಟಿಯನ್ನು ಸಾಕಷ್ಟು ಮುಂಚಿತವಾಗಿ ಡಿಡಿಓ ಗಳು ತಯಾರಿಸತಕ್ಕದ್ದು.

5. ಖಜಾನೆ–2 ರಲ್ಲಿ ಬಿಲ್ಲುಗಳನ್ನು ಸಲ್ಲಿಸುವ ಹಣ ಸೆಳೆಯುವ ಬಟವಾಡೆ ಅಧಿಕಾರಿಗಳು ಮೇಲೆ ಉಲ್ಲೇಖಿಸಿದ ದಿನಾಂಕದೊಳಗೆ ಆನ್‌ಲೈನ್‌ನಲ್ಲಿ ಮತ್ತು ಭೌತಿಕವಾಗಿ ಬಿಲ್ಲುಗಳನ್ನು ಸಲ್ಲಿಸತಕ್ಕದ್ದು.

6. ಖಜಾನೆ–2 ಪಿ.ಆರ್.ಐ. ಮಾಡ್ಯೂಲ್ ಅನುಷ್ಠಾನಗೊಂಡಿರುವ ಜಿಲ್ಲಾ ಪಂಚಾಯತ್ / ತಾಲ್ಲೂಕು ಪಂಚಾಯತ್ ಗಳ ಸಂಬಂಧ ವೆಚ್ಚವಾಗದೆ ಇರುವ 2019–20ರ ಅನುದಾನವನ್ನು ಸರ್ಕಾರದ ಲೆಕ್ಕ ಶೀರ್ಷಿಕೆಗೆ ಜಮೆ ಮಾಡಲು ಅನುಕೂಲವಾಗುವಂತೆ ದಿನಾಂಕ:30–03–2020 ರಂದು ಬಿಲ್ಲನ್ನು ಸಲ್ಲಿಸುವಂತೆ ಅವಕಾಶ ಕಲ್ಪಿಸಲಾಗಿದೆ.

**ಸಿ) ಖಜಾನೆಗಳಿಗೆ ಸೂಚನೆಗಳು:–**

1. ಎಲ್ಲಾ ಖಜಾನೆಗಳಲ್ಲಿ ಲೆಕ್ಕಗಳನ್ನು ಅಂತಿಮಗೊಳಿಸಲು ಅನುಕೂಲವಾಗುವಂತೆ ದಿನಾಂಕ:01–04–2020 ನ್ನು ವ್ಯವಹಾರ ರಹಿತ ದಿನವನ್ನಾಗಿ ಘೋಷಿಸಲಾಗಿದೆ.

2. ಖಜಾನೆಗಳು ಮಾರ್ಚ್ 2020ರ ಲೆಕ್ಕಗಳನ್ನು 31ನೇ ಮಾರ್ಚ್ 2020ರ ನಂತರವೂ ತೆರೆದಿರಕೂಡದೆಂದು ಸೂಚಿಸಲಾಗಿದೆ.

3. ಮಹಾಲೇಖಪಾಲರು (ಎ ಮತ್ತು ಇ)ರವರು 2019–20ರ ತಾತ್ಕಾಲಿಕ ಲೆಕ್ಕಗಳನ್ನು 10ನೇ ಮೇ 2020ರೊಳಗಾಗಿ ಸರ್ಕಾರಕ್ಕೆ ಕಳುಹಿಸಲು ಅನುವಾಗುವಂತೆ ಖಜಾನಾಧಿಕಾರಿಗಳು ನಿಗದಿತ ಸಮಯದೊಳಗೆ ಮಹಾಲೇಖಪಾಲರಿಗೆ ಮಾರ್ಚ್ 2020ರ ಲೆಕ್ಕಗಳನ್ನು ಸಲ್ಲಿಸತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಪವನ್ ಕುಮಾರ್ ಮಾಲಪಾಟಿ)
ಸರ್ಕಾರದ ಉಪ ಕಾರ್ಯದರ್ಶಿ (ಆಯವ್ಯಯ & ಸಂಪನ್ಮೂಲ)
ಆರ್ಥಿಕ ಇಲಾಖೆ

ಇವರಿಗೆ:-

1) ಮಹಾಲೇಖಪಾಲರು (A&E)/(G&SSA)/(E&RSA), ಕರ್ನಾಟಕ, ಬೆಂಗಳೂರು.

2) ರಿಜಿಸ್ಟ್ರಾರ್ ಜನರಲ್, ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು.

3) ಮುಖ್ಯ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.

4) ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ, ಬೆಂಗಳೂರು.

5) ಸರ್ಕಾರದ ಎಲ್ಲಾ ಅಪರ/ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು.

6) ಅಭಿವೃದ್ಧಿ ಆಯುಕ್ತರು, ವಿಧಾನಸೌಧ, ಬೆಂಗಳೂರು.

7) ಲೋಕಾಯುಕ್ತರು, ಕರ್ನಾಟಕ, ಬೆಂಗಳೂರು.

8) ಎಲ್ಲಾ ಪ್ರಾದೇಶಿಕ ಆಯುಕ್ತರುಗಳು.

9) ರಿಜಿಸ್ಟ್ರಾರ್, ಕರ್ನಾಟಕ ಆಡಳಿತ ಮಂಡಳಿ, ಕಂದಾಯ ಭವನ, ಕೆ.ಜಿ.ರಸ್ತೆ, ಬೆಂಗಳೂರು-9.

10) ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು /ಎಲ್ಲಾ ಜಿಲ್ಲಾ ಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.

11) ಆಯುಕ್ತರು, ಖಜಾನೆ ಇಲಾಖೆ, ಬೆಂಗಳೂರು.

12) ಎಲ್ಲಾ ಆಂತರಿಕ ಆರ್ಥಿಕ ಸಲಹೆಗಾರರು.

13) ಎಲ್ಲಾ ಇಲಾಖಾ ಮುಖ್ಯಸ್ಥರು.

14) ಕಛೇರಿ ಪ್ರತಿ/ಹೆಚ್ಚುವರಿ ಪ್ರತಿಗಳು.